**ಕರ್ನಾಟಕ ಸರ್ಕಾರದ ನಡವಳಿ**

**ವಿಷಯ:** ಶ್ರೀಮತಿ ಶಶಿಕಲಾ ಸದಸ್ಯರು ಉಡುಪಿ ತಾಲ್ಲೂಕು 33ನೇ ಬಡಾನಿಡಿಯೂರು ಗ್ರಾಮ ಪಂಚಾಯಿತಿ ರವರ ವಿರುದ್ಧ ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ 1993 ರ ಪ್ರಕರಣ 43(ಎ) ರನ್ವಯ ಕ್ರಮ ಕೈಗೊಳ್ಳುವ ಬಗ್ಗೆ.

**ಓದಲಾಗಿದೆ:**

1. ಸರ್ಕಾರದ ಇದೇ ಸಮಸಂಖ್ಯೆಯ ದಿನಾಂಕ: 24-01-2017 ರ ಕಾರಣ ಕೇಳುವ ನೋಟೀಸ್.
2. ಪಂಚಾಯಿತಿ ಅಭಿವೃದ್ಧಿ ಅಧಿಕಾರಿ 33ನೇ ಬಡಾನಿಡಿಯೂರು ಗ್ರಾಮ ಪಂಚಾಯಿತಿ, ಉಡುಪಿ ತಾಲ್ಲೂಕು ಮತ್ತು ಜಿಲ್ಲೆ, ರವರ ಪತ್ರ ಸಂಖ್ಯೆ: ಬ.ಗ್ರಾ.ಪಂ.216/2016-17, ದಿನಾಂಕ: 24-10-2016.
3. ಸರ್ಕಾರದ ಇದೇ ಸಮಸಂಖ್ಯೆಯ ವಿಚಾರಣಾ ತಿಳುವಳಿಕೆ ಪತ್ರ ದಿನಾಂಕ: 25-07-2017.

**ಪ್ರಸ್ತಾವನೆ :**

ಮೇಲೆ ಓದಲಾದ ಕ್ರಮ ಸಂಖ್ಯೆ (2) ರಲ್ಲಿ ಶ್ರೀಮತಿ ಶಶಿಕಲಾ ಸದಸ್ಯರು ಉಡುಪಿ ತಾಲ್ಲೂಕು 33ನೇ ಬಡಾನಿಡಿಯೂರು ಗ್ರಾಮ ಪಂಚಾಯಿತಿ ರವರು ದಿನಾಂಕ: 29-04-2016, 28-05-2016, 29-06-2016 ಹಾಗೂ 29-07-2016 ರಂದು ನಡೆದ ಗ್ರಾಮ ಪಂಚಾಯತಿಯ ಸಾಮಾನ್ಯ ಸಭೆಗಳಿಗೆ, ಪಂಚಾಯತಿಯ ಅನುಮತಿ ಇಲ್ಲದೆ ನಿರಂತರವಾಗಿ ನಾಲ್ಕು ಸಾಮಾನ್ಯ ಸಭೆಗಳಿಗೆ ಗೈರು ಹಾಜರಾಗಿದ್ದು, ಸದರಿ ಯವರ ವಿರುದ್ಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಕಾಯ್ದೆಯ ಪ್ರಕರಣ 43(ಎ) ರನ್ವಯ ಕ್ರಮ ಕೈಗೊಳ್ಳಲು ದಿನಾಂಕ: 24-10-2016 ರಂದು ಪಂಚಾಯಿತಿ ಅಭಿವೃದ್ಧಿ ಅಧಿಕಾರಿ 33ನೇ ಬಡಾನಿಡಿಯೂರು ಗ್ರಾಮ ಪಂಚಾಯಿತಿ, ಉಡುಪಿ ತಾಲ್ಲೂಕು ಮತ್ತು ಜಿಲ್ಲೆ, ಇವರು ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ (1) ರಲ್ಲಿ ಶ್ರೀಮತಿ ಶಶಿಕಲಾ ಸದಸ್ಯರು ಉಡುಪಿ ತಾಲ್ಲೂಕು 33ನೇ ಬಡಾನಿಡಿಯೂರು ಗ್ರಾಮ ಪಂಚಾಯಿತಿ ಇವರಿಗೆ ದಿನಾಂಕ: 24-01-2017 ರಂದು ಕಾರಣ ಕೇಳುವ ನೋಟೀಸ್ ಜಾರಿಗೊಳಿಸಲಾಗಿದ್ದು, ಸದರಿ ಕಾರಣ ಕೇಳುವ ನೋಟೀಸಿಗೆ ಶ್ರೀಮತಿ ಶಶಿಕಲಾ ಸದಸ್ಯರು ಉಡುಪಿ ತಾಲ್ಲೂಕು 33ನೇ ಬಡಾನಿಡಿಯೂರು ಗ್ರಾಮ ಪಂಚಾಯಿತಿ ರವರು ತಮ್ಮ ಸಮಜಾಯಿಷಿಯನ್ನು ಸಲ್ಲಿಸಿರುವುದಿಲ್ಲ.

ಮೇಲೆ ಓದಲಾದ ಕ್ರಮ ಸಂಖ್ಯೆ (3) ರಲ್ಲಿ ಶ್ರೀಮತಿ ಶಶಿಕಲಾ ಸದಸ್ಯರು ಉಡುಪಿ ತಾಲ್ಲೂಕು 33ನೇ ಬಡಾನಿಡಿಯೂರು ಗ್ರಾಮ ಪಂಚಾಯಿತಿ ಇವರು ದಿನಾಂಕ: 25-07-2017 ರಂದು ವಿಚಾರಣೆಗೆ ಹಾಜರಾಗಲು ತಿಳುವಳಿಕೆ ಪತ್ರ ನೀಡಲಾಗಿದ್ದು, ಸದರಿಯವರು ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು (ಪಂ.ರಾಜ್) ಇವರ ನ್ಯಾಯಾಲಯದಲ್ಲಿ ನಡೆದ ಮೌಖಿಕ ವಿಚಾರಣೆಗೆ ಹಾಜರಾಗಿ ತಾವು ಅನಾರೋಗ್ಯ ನಿಮಿತ್ಯ ಗ್ರಾಮ ಪಂಚಾಯಿತಿ ಸಾಮನ್ಯ ಸಭೆಗಳಿಗೆ ಗೈರು ಹಾಜರಾಗಿರುವುದಾಗಿ ತಿಳಿಸಿ ವೈದ್ಯಕೀಯ ಪ್ರಮಾಣ ಪತ್ರವನ್ನು ನೀಡಿರುತ್ತಾರೆ.

ಶ್ರೀಮತಿ ಶಶಿಕಲಾ ಸದಸ್ಯರು ಉಡುಪಿ ತಾಲ್ಲೂಕು 33ನೇ ಬಡಾನಿಡಿಯೂರು ಗ್ರಾಮ ಪಂಚಾಯಿತಿ ರವರು ದಿನಾಂಕ: 29-04-2016, 28-05-2016, 29-06-2016 ಹಾಗೂ 29-07-2016 ರಂದು ನಡೆದ ಗ್ರಾಮ ಪಂಚಾಯತಿಯ ಸಾಮಾನ್ಯ ಸಭೆಗಳಿಗೆ, ಅನಾರೋಗ್ಯದ ನಿಮಿತ್ಯ ಗೈರು ಹಾಜರಾಗಿರುವುದು, ನಂತರದಲ್ಲಿ ವೈದ್ಯಕೀಯ ಪ್ರಮಾಣ ಪತ್ರ ನೀಡಿರುವುದು ಕಂಡು ಬಂದಿರುವುದರಿಂದ ಸದರಿಯವರಿಗೆ ಎಚ್ಚರಿಕೆ ನೀಡಲು ಸರ್ಕಾರವು ನಿರ್ಣಯಿಸಿದೆ.

ಅದರಂತೆ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/1139/ಗ್ರಾಪಂಅ/2016**

**ಬೆಂಗಳೂರು, ದಿನಾಂಕ:17-10-2017**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಶ್ರೀಮತಿ ಶಶಿಕಲಾ ಸದಸ್ಯರು ಉಡುಪಿ ತಾಲ್ಲೂಕು 33ನೇ ಬಡಾನಿಡಿಯೂರು ಗ್ರಾಮ ಪಂಚಾಯಿತಿ ಇವರು ದಿನಾಂಕ: 29-04-2016, 28-05-2016, 29-06-2016 ಹಾಗೂ 29-07-2016 ರಂದು ನಡೆದ ಗ್ರಾಮ ಪಂಚಾಯತಿಯ ಸಾಮಾನ್ಯ ಸಭೆಗಳಿಗೆ, ಅನಾರೋಗ್ಯದ ನಿಮಿತ್ಯ ಗೈರು ಹಾಜರಾಗಿರುವುದು ನಂತರದಲ್ಲಿ ವೈದ್ಯಕೀಯ ಪ್ರಮಾಣ ಪತ್ರ ನೀಡಿರುವುದು ಕಂಡು ಬಂದಿರುವುದರಿಂದ ಸದರಿಯವರಿಗೆ ಎಚ್ಚರಿಕೆ ನೀಡಿ ಪ್ರಕರಣವನ್ನು ಮುಕ್ತಾಯಗೊಳಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಮುಬಾರಕ್ ಅಹ್ಮದ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

**ಪ್ರತಿಗಳು:**

1) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಉಡುಪಿ ಜಿಲ್ಲೆ.
2) ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಉಡುಪಿ ತಾಲ್ಲೂಕು, ಉಡುಪಿ ಜಿಲ್ಲೆ.
3) ಶ್ರೀಮತಿ ಶಶಿಕಲಾ ಸದಸ್ಯರು 33ನೇ ಬಡಾನಿಡಿಯೂರು ಗ್ರಾಮ ಪಂಚಾಯಿತಿ, ಉಡುಪಿ ತಾಲ್ಲೂಕು, ಉಡುಪಿ ಜಿಲ್ಲೆ.
4) ಪಂಚಾಯತಿ ಅಭಿವೃದ್ಧಿ ಅಧಿಕಾರಿ, 33ನೇ ಬಡಾನಿಡಿಯೂರು ಗ್ರಾಮ ಪಂಚಾಯಿತಿ, ಉಡುಪಿ ತಾಲ್ಲೂಕು, ಉಡುಪಿ ಜಿಲ್ಲೆ.
5) ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.
6) ಗಣಕ ಕೋಶ.